**National**
**Kannada**
**15.02.2025 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಜನರ ಜೀವನ ಬದಲಾಯಿಸಲು ಕೃತಕ ಬುದ್ಧಿಮತ್ತೆಯ ಬಳಕೆಯೊಂದಿಗೆ ನಾವೀನ್ಯತೆ ಉತ್ತೇಜಿಸುವಂತೆ ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ

೨. ಕೆಂಪೇಗೌಡ ವಿಮಾನ ನಿಲ್ದಾಣದಿಂದ ಬೆಂಗಳೂರು ನಗರಕ್ಕೆ ರೈಲು ಸಂಪರ್ಕ- ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಭರವಸೆ

೩. ನವದೆಹಲಿಯಲ್ಲಿ 'ಭಾರತ ಟೆಕ್ಸ್ ೨೦೨೫' ಜಾಗತಿಕ ಸಮ್ಮೇಳನ; ನಾಳೆ ಪ್ರಧಾನಮಂತ್ರಿ ನರೇಂದ್ರ ಮೋದಿ ಭಾಷಣ

೪. ಐಸಿಸಿ ಚಾಂಪಿಯನ್ಸ್ ಕ್ರಿಕೆಟ್ ಪಂದ್ಯಾವಳಿ; ದುಬೈಗೆ ಪ್ರಯಾಣ ಬೆಳೆಸಿದ ಭಾರತ ತಂಡ

**<><*<><>*><>**

ಎರಡು ದಿನಗಳ ರಾಂಚಿ ಭೇಟಿಯ ಕೊನೆಯ ದಿನವಾದ ಇಂದು, ರಾಷ್ಟ್ರಪತಿ ದ್ರೌಪದಿ ಮುರ್ಮು, ಬಿರ್ಲಾ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (ಬಿಐಟಿ) ಮೆಸ್ರಾದ ವಜ್ರ ಮಹೋತ್ಸವ ಆಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. Vಕಾರ್ಯಕ್ರಮದಲ್ಲಿ ಮಾತನಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು, ವಿಕಸಿತ್ ಭಾರತದ ಗುರಿ ಸಾಧಿಸುವಲ್ಲಿ ಯುವಕರ ಪಾತ್ರವನ್ನು ರಾಷ್ಟ್ರಪತಿಗಳು ತಮ್ಮ ಭಾಷಣದಲ್ಲಿ ಉಲ್ಲೇಖಿಸಿದರು. ಮಹಿಳಾ ಶಿಕ್ಷಣದ ಬಗ್ಗೆ ಒತ್ತು ನೀಡಿದ ಅವರು, ತಂತ್ರಜ್ಞಾನ ಕ್ಷೇತ್ರದಲ್ಲಿ ಹಲವಾರು ಹೆಣ್ಣು ಮಕ್ಕಳು ಸಂಸ್ಥೆಯ ಮೂಲಕ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿದ್ದಾರೆ ಎಂದು ಉಲ್ಲೇಖಿಸಿದರು. ಜನರ ಜೀವನವನ್ನು ಬದಲಾಯಿಸಲು ಸಹಾಯ ಮಾಡುವ ಕೃತಕ ಬುದ್ಧಿಮತ್ತೆಯ ಬಳಕೆಯೊಂದಿಗೆ ತಂತ್ರಜ್ಞಾನ ಕ್ಷೇತ್ರದಲ್ಲಿ ನಾವೀನ್ಯತೆಯನ್ನು ಉತ್ತೇಜಿಸುವ ಬಗ್ಗೆ ಅವರು ಒತ್ತಿ ಹೇಳಿದರು.

ಧ್ವನಿ : ರಾಷ್ಟ್ರಪತಿ ದ್ರೌಪದಿ ಮುರ್ಮು

ಉದ್ಘಾಟನಾ ಕಾರ್ಯಕ್ರಮದ ನಂತರ, ರಾಷ್ಟ್ರಪತಿ ಮುರ್ಮು ಅವರು ಸಂಸ್ಥೆಯ ಆವರಣದಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ ಪ್ರದರ್ಶನವನ್ನು ಉದ್ಘಾಟಿಸಿದರು. ಇದು ಸಂಸ್ಥೆಯ ಅಧ್ಯಾಪಕರು ಮತ್ತು ವಿದ್ಯಾರ್ಥಿಗಳಿಂದ ಅತ್ಯಾಧುನಿಕ ಸಂಶೋಧನೆ ಮತ್ತು ನಾವೀನ್ಯತೆಗಳನ್ನು ಪ್ರದರ್ಶಿಸಿತು. ಆಡಳಿತ ಮಂಡಳಿಯ ಅಧ್ಯಕ್ಷ ಸಿಕೆ ಬಿರ್ಲಾ, ಬಿಐಟಿ ಮೆಸ್ರಾದ ಉಪಕುಲಪತಿ ಪ್ರೊಫೆಸರ್ ಡಾ. ಇಂದ್ರನೀಲ್ ಮನ್ನಾ, ಕುಲ ಸಚಿವ ಪ್ರೊಫೆಸರ್ ಡಾ. ಸಂದೀಪ್ ದತ್ತಾ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

**<><*<><>*><>**

ಬೆಂಗಳೂರು ಸಮೀಪ ಹೊಸ ಮೊಬೈಲ್ ಉತ್ಪಾದನಾ ಕಂಪನಿ ಆರಂಭಿಸಲಾಗುತ್ತಿದ್ದು, ೪೦ ಸಾವಿರ ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ ಎಂದು ಕೇಂದ್ರ ರೈಲ್ವೆ, ವಾರ್ತಾ ಮತ್ತು ಪ್ರಸಾರ ಖಾತೆ ಹಾಗೂ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಖಾತೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಬಾರಿಯ ಬಜೆಟ್‌ನಲ್ಲಿ ಸಣ್ಣ ಹಾಗೂ ಅತಿ ಸಣ್ಣ ಕೈಗಾರಿಕೆಗಳಿಗೆ ಸಾಲ ಸೌಲಭ್ಯವನ್ನು ಸುಲಭ ಕಂತುಗಳಲ್ಲಿ ಪಾವತಿಸುವ ಸುಲಲಿತ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಹೇಳಿದ್ದಾರೆ.

ಧ್ವನಿ: ಅಶ್ವಿನಿ ವೈಷ್ಣವ್, ಕೇಂದ್ರ ಸಚಿವ

ಈ ಬಾರಿಯ ಆಯವ್ಯಯದಲ್ಲಿ ಕರ್ನಾಟಕಕ್ಕೆ ಶೇಕಡ ೯ ರಷ್ಟು ಅನುದಾನ ನೀಡಲಾಗಿದ್ದು, ರಾಜ್ಯದ ರೈಲ್ವೆಗೆ ೭ ಸಾವಿರದ ೫೬೪ ಕೋಟಿ ರೂಪಾಯಿ ಅನುದಾನ ಒದಗಿಸಲಾಗಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಹತ್ತು ವಂದೇ ಭಾರತ್ ರೈಲುಗಳು ಕರ್ನಾಟಕದಲ್ಲಿ ಈಗಾಗಲೇ ಸಂಚರಿಸುತ್ತಿದ್ದು, ಇನ್ನು ಹೆಚ್ಚಿನ ರೈಲು ನೀಡಲು ಸಿದ್ಧ ಎಂದು ಸ್ಪಷ್ಟಪಡಿಸಿದ್ದಾರೆ. ಸಬ್ ಅರ್ಬನ್ ರೈಲ್ವೆ ಯೋಜನೆಗೆ ೧೫ ಸಾವಿರದ ೭೬೭ ಕೋಟಿ ರೂಪಾಯಿ ನೀಡಲಾಗಿದೆ. ಬೆಂಗಳೂರಿನ ಸಂಚಾರ ದಟ್ಟಣೆ ನೀಗಿಸಲು ಸಬ್ ಅರ್ಬನ್ ರೈಲು, ಮೆಟ್ರೋ ರೈಲು, ವರ್ತುಲ ರೈಲು ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಕೆ. ರೈಟ್ಸ್ ಸಂಸ್ಥೆಯಲ್ಲಿ ತಾಂತ್ರಿಕ ನೈಪುಣ್ಯತೆಯುಳ್ಳ ಅಧಿಕಾರಿಗಳ ಕೊರತೆಯಿಂದ ರೈಲು ಯೋಜನೆ ಕುಂಟುತ್ತಾ ಸಾಗಿದೆ. ರಾಜ್ಯ ಸರ್ಕಾರ ತಕ್ಷಣವೇ ತಾಂತ್ರಿಕ ನೈಪುಣ್ಯತೆ ಇರುವ ವ್ಯವಸ್ಥಾಪಕ ನಿರ್ದೇಶಕರನ್ನು ನೇಮಿಸುವಂತೆ ಒತ್ತಾಯಿಸಿದ್ದಾರೆ. ಬೆಂಗಳೂರಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ರೈಲ್ವೆ ಸಂಪರ್ಕ ಕಲ್ಪಿಸಲು ಯೋಜನೆ ಸಿದ್ಧಗೊಳಿಸಲಾಗಿದೆ ಎಂದು ಅವರು ಹೇಳಿದ್ದಾರೆ. ಇದೇ ವೇಳೆ ಬೆಂಗಳೂರಿನಲ್ಲಿ ಮೆಟ್ರೋ ದರ ಏರಿಕೆಗೆ ರಾಜ್ಯ ಸರ್ಕಾರವೇ ಕಾರಣ ಎಂದು ಅವರು ದೂರಿದ್ದಾರೆ.

**<><*<><>*><>**

ಜಾಗತಿಕ ಜವಳಿ ಕಂಪನಿಗಳಿಗೆ ಭಾರತವು ವಿಶ್ವಾಸಾರ್ಹ ಮತ್ತು ಸುಸ್ಥಿರ ತಾಣವಾಗಿ ಬೆಳೆಯುತ್ತಿದೆ. ಈ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಭಾನುವಾರ ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ 'ಭಾರತ ಟೆಕ್ಸ್ ೨೦೨೫' ಜಾಗತಿಕ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ನವದೆಹಲಿಯ ಭಾರತ ಮಂಟಪಂನಲ್ಲಿ ಏರ್ಪಡಿಸಲಾಗಿರುವ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ, ಸಂಜೆ ೪ ಗಂಟೆಗೆ ಭಾಗವಹಿಸಲಿದ್ದಾರೆ ಎಂದು ಪ್ರಧಾನಮಂತ್ರಿ ಕಾರ್ಯಾಲಯ ಪ್ರಕಟಣೆಯಲ್ಲಿ ತಿಳಿಸಿದೆ. ಫೆಬ್ರವರಿ ೧೪ ರಿಂದ ೧೭ರವರೆಗೆ ಏರ್ಪಡಿಸಲಾಗಿರುವ ವಿಶಿಷ್ಟ ಕಾರ್ಯಕ್ರಮದಲ್ಲಿ, ಕಚ್ಚಾ ವಸ್ತುಗಳು, ಬಿಡಿಭಾಗಗಳು ಸೇರಿದಂತೆ ಸಿದ್ಧಪಡಿಸಿದ ಉತ್ಪನಗಳವರೆಗಿನ ಸಂಪೂರ್ಣ ಜವಳಿ ಮೌಲ್ಯ ಸರಪಳಿಯನ್ನು ಒಂದೇ ಸೂರಿನಡಿ ತರುವ ಉದ್ದೇಶ ಸಾಕಾರಗೊಳ್ಳಲಿದೆ. ಈ ಕಾರ್ಯಕ್ರಮವು, ಅಧಿವೇಶನ, ದುಂಡು ಮೇಜಿನ ಚರ್ಚೆಗಳು ಮತ್ತು ಕಾರ್ಯಗಾರ ತರಗತಿಗಳನ್ನು ಒಳಗೊಂಡ ಜಾಗತಿಕ ಮಟ್ಟದ ಸಮ್ಮೇಳನವಾಗಲಿದೆ. ೨೦೨೩ರಲ್ಲಿ ೩೪ ಶತಕೋಟಿ ಡಾಲರ್ ಮೌಲ್ಯದ ಜವಳಿ ಮತ್ತು ಉಡುಪು ರಫ್ತು ಮಾಡುವುದರ ಮೂಲಕ ಭಾರತವು ಆರನೇ ಅತಿ ದೊಡ್ಡ ರಫ್ತು ರಾಷ್ಟ್ರವಾಗಿ ಹೊರಹೊಮ್ಮಿತ್ತು. ೪೫ ಮಿಲಿಯನ್‌ಗೂ ಹೆಚ್ಚು ಜನರು ಈ ಕ್ಷೇತ್ರದಲ್ಲಿ ಉದ್ಯೋಗ ಪಡೆದಿದ್ದಾರೆ.

<><*<><>*><>

ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಸಂಸತ್ತಿನಲ್ಲಿ ಇತ್ತೀಚಿಗೆ ಮಾಡಿದ ಭಾಷಣದಲ್ಲಿ ಭಾರತಕ್ಕೆ ಆರ್ಥಿಕತೆಯ ಸ್ಪಷ್ಟ ಚಿತ್ರಣವನ್ನು ಒದಗಿಸಿದ್ದಾರೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಕೇಂದ್ರ ಆಯವ್ಯಯ ಮತ್ತು ಆದಾಯ ತೆರಿಗೆ ಮಸೂದೆಯ ಪ್ರಸ್ತುತಪಡಿಸಿದ ಕುರಿತು ಸಂಸತ್ತಿನಲ್ಲಿ ಹಣಕಾಸು ಸಚಿವರ ಭಾಷಣವನ್ನು ಹಂಚಿಕೊಂಡ ಪ್ರಧಾನಿ ನರೇಂದ್ರ ಮೋದಿ, ಸರ್ಕಾರ ಕೈಗೊಳ್ಳುತ್ತಿರುವ ಸುಧಾರಣಾ ಕ್ರಮಗಳನ್ನು ಸಚಿವರು ಪ್ರತಿನಿಧಿಸಿದರು ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಶ್ಲಾಘಿಸಿದ್ದಾರೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಆಶಯದಂತೆ, ೨೦೩೦ ರ ವೇಳೆಗೆ ೫೦೦ ಗಿಗಾವ್ಯಾಟ್ ನವೀಕರಿಸಬಲ್ಲ ಇಂಧನ ಸಾಮರ್ಥ್ಯ ಹೊಂದುವ ಮಹತ್ವಾಕಾಂಕ್ಷೆಯ ಗುರಿಯನ್ನು ತಲುಪಲು ಭಾರತ ಶ್ರಮಿಸುತ್ತಿದೆ. ದೇಶವು ಈಗಾಗಲೇ ಸೌರ ಇಂಧನ ಉತ್ಪಾದನೆಯಲ್ಲಿ ಮಹಾಶಕ್ತಿಯಾಗಿ ಮಾರ್ಪಟ್ಟಿದೆ ಎಂದು ವಿಶ್ವಸಂಸ್ಥೆಯ ಹವಾಮಾನ ಬದಲಾವಣೆಯ ನೀತಿ-ನಿರೂಪಣಾ ಸಮಾವೇಶದ ಕಾರ್ಯನಿರ್ವಾಹಕ ಕಾರ್ಯದರ್ಶಿ ಸೈಮನ್ ಸ್ಟೀಲ್ ಹೇಳಿದ್ದಾರೆ. ನ್ಯೂಯಾರ್ಕ್‌ನಲ್ಲಿಂದು ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಸೈಮನ್ ಸ್ಟೀಲ್, ಸುಸ್ಥಿರ ಬೆಳವಣಿಗೆ ಮತ್ತು ಇಂಧನ ಭದ್ರತೆಗೆ ಆದ್ಯತೆ ನೀಡುವುದರೆಡೆಗೆ ಕೆಲವು ಸರ್ಕಾರಗಳು ಮಾತುಕಥೆ ಹಂತದಲ್ಲಿದ್ದರೆ, ಪ್ರಧಾನಿ ನರೇಂದ್ರ ಮೋದಿ ನಾಯಕತ್ವದ ಭಾರತ ಸರ್ಕಾರ ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತವಾಗಿದೆ ಎಂದರು. ಹವಾಮಾನ ಬದಲಾವಣೆಯನ್ನು ನಿಭಾಯಿಸುವಾಗ ಇಂಧನ ಲಭ್ಯತೆಯನ್ನು ಖಚಿತಪಡಿಸಿಕೊಳ್ಳುವುದು ನಿರ್ಣಾಯಕವಾಗಿದೆ, ಎಂದು ಸ್ಟೀಲ್ ಹೇಳಿದರು, ಈ-ಟಿ ನವ್ ಜಾಗತಿಕ ವ್ಯಾಪಾರ ಶೃಂಗಸಭೆ ೨೦೨೫ರಲ್ಲಿ ಶುದ್ಧ ಇಂಧನ ಮೂಲಸೌಕರ್ಯವನ್ನು ವಿಸ್ತರಿಸುವ ಭಾರತದ ಮಹತ್ವಾಕಾಂಕ್ಷೆಯ ಯೋಜನೆಯ ಪ್ರಾಮುಖ್ಯತೆಯನ್ನು ಅವರು ಶ್ಲಾಘಿಸಿದರು. ದೇಶವು ಈಗಾಗಲೇ ೧೦೦ ಗಿಗಾ ವ್ಯಾಟ್ ಸ್ಥಾಪಿತ ಸೌರಶಕ್ತಿ ಸಾಮರ್ಥ್ಯವನ್ನು ಮೀರುವ ಮೂಲಕ ಐತಿಹಾಸಿಕ ಮೈಲಿಗಲ್ಲು ಸಾಧಿಸಿದೆ, ನವೀಕರಿಸಬಹುದಾದ ಇಂಧನದಲ್ಲಿ ಜಾಗತಿಕ ನಾಯಕನಾಗಿ ತನ್ನ ಸ್ಥಾನವನ್ನು ಭಾರತ ಬಲಪಡಿಸಿದೆ. ನಿವ್ವಳ-ಶೂನ್ಯ ಹೊರಸೂಸುವಿಕೆಯನ್ನು ಸಾಧಿಸುವ ಭಾರತದ ಬದ್ಧತೆಯು ಜಾಗತಿಕ ಗುರಿಗಳೊಂದಿಗೆ ಹೊಂದಿಕೆಯಾಗಲಿದ್ದು ಸುಸ್ಥಿರತೆಯೆಡೆಗೆ ಭಾರತದ ಬದ್ಧತೆಯನ್ನು ಪ್ರದರ್ಶಿಸುತ್ತದೆ ಎಂದರು. ಪಿಎಂ ಸೂರ್ಯ ಘರ್ ಮಫ್ತ್ ಬಿಜ್ಲಿ ಯೋಜನೆಯು ಮೇಲ್ಛಾವಣಿ ಸೌರಶಕ್ತಿಯನ್ನು ವಾಸ್ತವವನ್ನಾಗಿ ಮಾಡುತ್ತಿದೆ. ಪ್ರತಿ ಮನೆಯನ್ನು ಶುದ್ಧ ಇಂಧನ ಶಕ್ತಿಯಿಂದ ಸಬಲೀಕರಣಗೊಳಿಸುತ್ತಿದೆ. ೨೦೨೪ ರಲ್ಲಿ ಪ್ರಾರಂಭಿಸಲಾದ ಈ ಯೋಜನೆಯು ಇಲ್ಲಿಯವರೆಗೆ ಸುಮಾರು ೬ ಲಕ್ಷ ಮೇಲ್ಛಾವಣಿ ಸೌರಶಕ್ತಿ ಘಟಕಗಳನ್ನು ಸ್ಥಾಪಿಸುವಲ್ಲಿ ಸಫಲವಾಗಿದೆ ಎಂದು ಮಾಹಿತಿ ನೀಡಿದರು.

<><*<><>*><>

ಪ್ರಸಿದ್ಧ ಗಾಯಕ, ಸಂಗೀತ ನಿರ್ದೇಶಕ ಪ್ರತುಲ್ ಮುಖ್ಯೋಪಾಧ್ಯಾಯ, ಕೋಲ್ಕತ್ತಾದ ಎಸ್‌ಎಸ್‌ಕೆಎಂ ಆಸ್ಪತ್ರೆಯಲ್ಲಿ ಇಂದು ನಿಧನರಾಗಿದ್ದಾರೆ. ಅವರಿಗೆ ೮೨ ವರ್ಷ ವಯಸ್ಸಾಗಿತ್ತು. ವಯೋಸಹಜ ಖಾಯಿಲೆಯಿಂದ ಆಸ್ಪತ್ರೆಗೆ ದಾಖಲಾಗಿದ್ದ ಅವರಿಗೆ ಉತ್ತಮ ಚಿಕಿತ್ಸೆ ಒದಗಿಸುವ ವ್ಯವಸ್ಥೆಯನ್ನು ಸ್ವತಃ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ವಹಿಸಿದ್ದರು. ಕೆಲವು ದಿನಗಳ ಹಿಂದೆ ಆಸ್ಪತ್ರೆಗೆ ಭೇಟಿ ನೀಡಿ, ಪ್ರತುಲ್ ಅವರ ಆರೋಗ್ಯ ವಿಚಾರಿಸಿದ್ದರು. ಪ್ರತುಲ್

ಮುಖೋಪಾಧ್ಯಾಯ, ನಿಧನಕ್ಕೆ ಸಂತಾಪ ಸೂಚಿಸಿರುವ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ, ಇದು ರಾಜ್ಯದ ಸಂಗೀತ ಕ್ಷೇತ್ರಕ್ಕೆ ಭರಿಸಲಾರದ ನಷ್ಟವಾಗಿದ್ದು, ಅವರ ಕುಟುಂಬಕ್ಕೆ ಸಂತ್ವಾನ ತಿಳಿಸಿದ್ದಾರೆ.

**<><*<><>*><>**

ರೋಹಿತ್ ಶರ್ಮಾ ನೇತೃತ್ವದ ಭಾರತೀಯ ಕ್ರಿಕೆಟ್ ತಂಡವು ಮುಂಬರುವ ಐಸಿಸಿ ಚಾಂಪಿಯನ್ಸ್ ಟ್ರೋಫಿಗಾಗಿ ಇಂದು ದುಬೈಗೆ ಪ್ರಯಾಣ ಬೆಳೆಸಿದೆ. ಮುಖ್ಯ ಕೋಚ್ ಗೌತಮ್ ಗಂಭೀರ್, ಉಪನಾಯಕ ಶುಭ್ಮನ್ ಗಿಲ್ ಮತ್ತು ಸ್ಟಾರ್ ಬ್ಯಾಟ್ಸ್‌ಮನ್ ವಿರಾಟ್ ಕೊಹ್ಲಿ ಅವರೊಂದಿಗೆ ಇಡೀ ತಂಡವು ಮುಂಬೈನ ಛತ್ರಪತಿ ಶಿವಾಜಿ ಮಹಾರಾಜ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಿಂದ ದುಬೈಗೆ ತೆರಳಿದರು. ಭಾರತವು ಇದೇ ೨೦ ರಂದು ಬಾಂಗ್ಲಾದೇಶ ವಿರುದ್ಧ ತನ್ನ ಅಭಿಯಾನವನ್ನು ಪ್ರಾರಂಭಿಸಲಿದೆ. ನಂತರ ಇದೆ ೨೩ ರಂದು ಪಾಕಿಸ್ತಾನ ವಿರುದ್ಧ ಮತ್ತು ಮಾರ್ಚ್ ೨ ರಂದು ನ್ಯೂಜಿಲೆಂಡ್ ವಿರುದ್ಧದ ಪಂದ್ಯಗಳಲ್ಲಿ ಸೆಣಸಲಿದೆ.

**<><*<><>*><>**

ಕೇಂದ್ರ ಮತ್ತು ಅಸ್ಸಾಂನಲ್ಲಿ ಆಡಳಿತದಲ್ಲಿರುವ ಎನ್‌ಡಿಎ ಸರ್ಕಾರಗಳು ಬೋಡೋ ಸಮುದಾಯವನ್ನು ಸಬಲೀಕರಣಗೊಳಿಸಲು ಮತ್ತು ಸಮುದಾಯದ ಆಕಾಂಕ್ಷೆಗಳನ್ನು ಈಡೇರಿಸಲು ಅವಿರತವಾಗಿ ಶ್ರಮಿಸುತ್ತಿವೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಕೋಕ್ರಝಾರ್‌ನಲ್ಲಿ ನಡೆದ ಒಂದು ದಿನದ ವಿಧಾನಸಭೆ ಅಧೇವೇಶನ ಕುರಿತು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರ ಸಾಮಾಜಿಕ ಮಾಧ್ಯಮ ಪೋಸ್ಟ್‌ಗೆ ಪ್ರತಿಕ್ರಿಯಿಸಿರುವ ಪ್ರಧಾನಿ ನರೇಂದ್ರ ಮೋದಿ, ಈ ಪ್ರಯತ್ನಗಳು ಇನ್ನೂ ಹೆಚ್ಚಿನ ಹುರುಪಿನಿಂದ ಮುಂದುವರೆಯಲಿವೆ ಎಂದು ತಿಳಿಸಿದ್ದಾರೆ.

**<><*<><>*><>**

ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುವ ಮಹಾಕುಂಭಮೇಳಕ್ಕೆ ಹೆಚ್ಚಿನ ಸಂಖ್ಯೆಯ ಭಕ್ತರು ಬರುವ ನಿರೀಕ್ಷೆಯಿದ್ದು, ಉತ್ತರ ಪ್ರದೇಶ ಸಾರಿಗೆ ಸಂಸ್ಥೆಯು ಮುಂದಿನ ೪ ದಿನಗಳಲ್ಲಿ ೨ ಸಾವಿರದ ೨೫೦ ಹೆಚ್ಚುವರಿ ಬಸ್‌ಗಳ ಸಂಚಾರಕ್ಕೆ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**